# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/ 522 /ಗ್ರಾಪಂಅ/2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 27-03-2014.

ಇವರಿಂದ:

ಸರ್ಕಾರದ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

ಇವರಿಗೆ:

ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತಿ,

ಮಾನ್ಯರೆ,

**ವಿಷಯ:** ಗ್ರಾಮ ಪಂಚಾಯತಿಗಳು ತೆರಿಗೆ ವಸೂಲಾತಿ ಹಾಗೂ ಗ್ರಾಮ ಪಂಚಾಯತಿಗಳು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕಲ್ಯಾಣಕ್ಕಾಗಿ ಶೇ 25 ರಷ್ಟು ಹಣವನ್ನು ಖರ್ಚು ಮಾಡಿದ ಪ್ರಗತಿ ವಿವರವನ್ನು ಸಲ್ಲಿಸುವ ಬಗ್ಗೆ.

**ಉಲ್ಲೇಖ:** ಇದೇ ಸಮಸಂಖ್ಯೆ ಸರ್ಕಾರದ ಪತ್ರ ದಿ:06-11-2013.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಗ್ರಾಮ ಪಂಚಾಯತಿಗಳು ತೆರಿಗೆ ವಸೂಲಾತಿ ಮಾಡಿರುವ ಮತ್ತು ನೀರಿನ ಕರ ಮಾಹಿತಿಯನ್ನು ಪಂಚತಂತ್ರ ತಂತ್ರಾಂಶದಲ್ಲಿ ಏಪ್ರಿಲ್ ತಿಂಗಳ 5ನೇ ತಾರೀಖಿನೊಳಗೆ ತಾಲ್ಲೂಕುವಾರು ಮತ್ತು ಗ್ರಾಮ ಪಂಚಾಯತಿವಾರು ಅಪ್ಲೋಡ್ ಮಾಡುವುದು ಸದರಿ ವಿಷಯವು ಆರ್.ಎಫ್.ಡಿ. ಗುರಿಯಲ್ಲಿ ಸೇರಿಕೊಂಡಿರುತ್ತದೆ. ಆದ್ದರಿಂದ ಇದನ್ನು ಮೊದಲ ಆದ್ಯತೆ ಎಂದು ಪರಿಗಣಿಸಲು ತಿಳಿಸಿದೆ.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕಲ್ಯಾಣಕ್ಕಾಗಿ ಶೇ 25 ರಷ್ಟು ಹಣವನ್ನು ಖರ್ಚು ಮಾಡಿದ ಪ್ರಗತಿ ವಿವರವನ್ನು ಪ್ರತಿ ತಿಂಗಳು ದಿನಾಂಕ 5 ರೊಳಗೆ ಕಳುಹಿಸುವಂತೆ ಕೋರಲಾಗಿತ್ತು. ಆದರೆ ಇದುವರೆವಿಗೂ ತಮ್ಮಿಂದ ಯಾವುದೇ ಮಾಹಿತಿ ಸ್ವೀಕೃತವಾಗಿರುವುದಿಲ್ಲ. ಮಾರ್ಚ್ ಅಂತ್ಯದ ಪ್ರಗತಿಯ ವರದಿಯು ಬಹಳ ಮುಖ್ಯವಾಗಿರುತ್ತದೆ. ಇದರಿಂದ ಆಯಾ ಆರ್ಥಿಕ ವರ್ಷದಲ್ಲಿ ಪ.ಜಾ/ ಪ.ವರ್ಗಗಳ ಜನಾಂಗಕ್ಕೆ ಮೀಸಲಿರಿಸಿರುವ ಅನುದಾನದಲ್ಲಿ ಎಷ್ಟನ್ನು ವೆಚ್ಚ ಮಾಡಲಾಗಿದೆ ಎಂಬುದನ್ನು ತಿಳಿದುಕೊಳ್ಳಬಹುದಾಗಿದೆ. ಆಯಾ ತಾಲ್ಲೂಕಿನ ಗ್ರಾಮ ಪಂಚಾಯತಿವಾರು ವಿವರಗಳನ್ನು ನೀಡಲು ಕೋರಿದೆ. ಮುಂದೆ ಇದನ್ನು ಪಂಚತಂತ್ರದಲ್ಲಿ ಅಳವಡಿಸಲು ಅಗತ್ಯ ಕ್ರಮವಹಿಸಲಾಗುವುದು. ಈ ವಿಷಯವನ್ನು ಮೊದಲ ಆದ್ಯತೆ ಎಂದು ಪರಿಗಣಿಸುವುದು. ಆದ್ದರಿಂದ ವಿಳಂಬಕ್ಕೆ ಅವಕಾಶ ನೀಡದೆ ಪ್ರತಿ ತಿಂಗಳು ದಿನಾಂಕ 5 ರೊಳಗೆ (ಇಮೇಲ್ ವಿಳಾಸ **sogp2011@gmail.com** ಮತ್ತು ಫ್ಯಾಕ್ಸ್ ಸಂಖ್ಯೆ: **080-22353925** ಮೂಲಕ) ಸರ್ಕಾರಕ್ಕೆ ಕಳುಹಿಸುವಂತೆ ಮತ್ತೊಮ್ಮೆ ತಮ್ಮನ್ನು ಕೋರಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

27/3/14

(ಕೆ. ಯಾಲಕ್ಕಿಗೌಡ)
ನಿರ್ದೇಶಕರು (ಪಂ.ರಾಜ್)
ಹಾಗೂ ಪದನಿಮಿತ್ತ ಜಂಟಿ ಕಾರ್ಯದರ್ಶಿ
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿ:**

1. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.